**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 1122 ಗ್ರಾಪಂಅ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 07.12.2016

# ಸುತ್ತೋಲೆ

**ವಿಷಯ:** ರಾಜ್ಯದ ಗ್ರಾಮ ಪಂಚಾಯತಿಗಳು ಮತ್ತು ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯಲ್ಲಿರುವ ವಕ್ಫ್ ಆಸ್ತಿಗಳ ಸಂರಕ್ಷಣೆ ಕುರಿತು.

**ಉಲ್ಲೇಖ:**
1) ವಕ್ಫ್ ಕಾಯ್ದೆ, 1995 ತಿದ್ದುಪಡಿ, 2013 ರ ಕಲಂ 36 ಮತ್ತು ಕಲಂ 5 ಮತ್ತು 7(6)
2) ಸರ್ಕಾರದ ಕಾರ್ಯದರ್ಶಿ, ಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ ರವರ ಅ.ಸ.ಪ.ಸಂಖ್ಯೆ: ಎಂಡಬ್ಲ್ಯೂಡಿ 160 ಡಬ್ಲ್ಯೂಇಎಸ್ 2016, ದಿನಾಂಕ 19.11.2016

***

ವಕ್ಫ್ ಕಾಯ್ದೆ, 1995 ತಿದ್ದುಪಡಿ ಕಾಯ್ದೆ, 2013 ಕೇಂದ್ರ ಸರ್ಕಾರದ ಕಾಯ್ದೆಯಾಗಿದ್ದು ಇದರ ಅಡಿ 1997 ರಲ್ಲಿ ನಿಯಮಗಳನ್ನು ರಚಿಸಲಾಗಿರುತ್ತದೆ. ರಾಜ್ಯದಾದ್ಯಂತ 23481 ಆಸ್ತಿಗಳನ್ನು 1995 ರಲ್ಲಿ ಸರ್ವೆ ಮಾಡಿದ ನಂತರ ರಾಜ್ಯ ಪತ್ರದಲ್ಲಿ ವಕ್ಫ್ ಆಸ್ತಿಗಳೆಂದು ಪ್ರಕಟಿಸಲಾಗಿರುತ್ತದೆ. ತದನಂತರ ಇದುವರೆವಿಗೂ 12064 ಆಸ್ತಿಗಳನ್ನು ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಲ್ಲಿ ನೋಂದಾಯಿಸಲಾಗಿರುತ್ತವೆ. ಇವುಗಳಲ್ಲಿ ಹೆಚ್ಚಿನ ಸಂಖ್ಯೆಯ ಆಸ್ತಿಗಳು ನಾನಾ ಕಾರಣಗಳಿಂದ ಖಾತೆಯಾಗದೇ ಇರುವುದನ್ನು ಗಮನಿಸಿ ಅಕ್ಟೋಬರ್ 2016 ರಲ್ಲಿ ಖಾತೆಗಾಗಿ ಅರ್ಜಿ ಸಲ್ಲಿಸುವ ಕಾರ್ಯಕ್ರಮವನ್ನು ರಾಜ್ಯದಾದ್ಯಂತ ಹಮ್ಮಿಕೊಳ್ಳಲಾಗಿದೆ. ನೋಂದಾಯಿಸಲಾಗಿರುವ ಶೇ.30% ರಷ್ಟು ವಕ್ಫ್ ಆಸ್ತಿಗಳು ಗ್ರಾಮೀಣ ಪ್ರದೇಶಗಳಲ್ಲಿರುತ್ತವೆ. ಈ ಹಿನ್ನೆಲೆಯಲ್ಲಿ ವಕ್ಫ್ ಸಂಸ್ಥೆ ಅಥವಾ ವಕ್ಫ್ ಅಧಿಕಾರಿಗಳಿಂದ ಬಂದ ಅರ್ಜಿಗಳ ಆಧಾರ ವಕ್ಫ್ ನೋಂದಾಯಿತ ಪತ್ರದ ನಕಲು ಅಥವಾ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿರುವ ಪ್ರತಿಗಳನ್ನು ಸಲ್ಲಿಸಿದ್ದಲ್ಲಿ ನಿಯಮಾನುಸಾರ ಪರಿಶೀಲಿಸಿ ಆದ್ಯತೆ ಮೇರೆಗೆ ಖಾತೆ ಬದಲಾವಣೆ ಮಾಡಿ ನೀಡಲು ಸೂಚಿಸಲಾಗಿದೆ.

ವಕ್ಫ್ ಕಾಯ್ದೆ ಕಲಂ 52(ಎ) ರಲ್ಲಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅನುಮೋದನೆ ಪಡೆಯದೆ ವಕ್ಫ್ ಚರ ಮತ್ತು ಸ್ಥಿರ ಆಸ್ತಿಯ ಶಾಶ್ವತ ಅಥವಾ ತಾತ್ಕಾಲಿಕ ಮಾರಾಟ, ಖರೀದಿ ಅಥವಾ ಸ್ವಾಧೀನಪಡಿಸಿಕೊಳ್ಳುವವರಿಗೆ ಎರಡು ವರ್ಷ ತನಕದ ಕಠಿಣ ಶಿಕ್ಷೆಯನ್ನು ವಿಧಿಸುವ ಅವಕಾಶ ಕಲ್ಪಿಸಲಾಗಿರುತ್ತದೆ. ಜಾರಿಯಲ್ಲಿರುವ ಯಾವುದೇ ಕಾನೂನಿನ ಪ್ರತಿಕೂಲ ಪ್ರಭಾವ ಬೀರದಂತೆ ಈ ರೀತಿಯಾಗಿ ಶಾಶ್ವತ ಅಥವಾ ತಾತ್ಕಾಲಿಕ ಮಾರಾಟ, ಖರೀದಿ ಅಥವಾ ಸ್ವಾಧೀನಪಡಿಸಿಕೊಳ್ಳಲಾಗಿರುವ ವಕ್ಫ್ ಆಸ್ತಿಯು ವಕ್ಫ್ ಮಂಡಳಿಗೆ ಯಾವುದೇ ಪರಿಹಾರವಿಲ್ಲದೇ ನಿಹಿತಗೊಳ್ಳುವುದೆಂದಿದೆ.

ಕೋಡ್ ಆಫ್ ಕ್ರಿಮಿನಲ್ ಪ್ರೊಸೀಜರ್ 1973 (1974 ರ ಎರಡನೇ) ರಲ್ಲಿ ಯಾವುದೇ ಪ್ರಾವಧಾನಗಳಿದ್ದರೂ ವಕ್ಫ್ (ತಿದ್ದುಪಡಿ) ಕಾಯ್ದೆ 2013 ರ ಕಲಂ 52 (ಎ) ರನ್ವಯ ಶಿಕ್ಷಾರ್ಹ ಅಪರಾಧಕ್ಕೆ ವಿಧಿಸಲಾಗುವ ಶಿಕ್ಷೆಯು ಸಂಜ್ಞೇಯವಾಗಿರತಕ್ಕದ್ದು ಮತ್ತು ಜಾಮೀನು ರಹಿತವಾಗಿರುತ್ತದೆ. ಇಂತಹ ಅಪರಾಧಗಳಿಗೆ ವಕ್ಫ್ ಮಂಡಳಿ ಅಥವಾ ರಾಜ್ಯ ಸರ್ಕಾರದಿಂದ ಅಧಿಕೃತವಾಗಿರುವ ಯಾವುದೇ ಅಧಿಕಾರಿಯು ದೂರು ಸಲ್ಲಿಸಿದರೆ ಮಾತ್ರ ನ್ಯಾಯಾಲಯವು ಸ್ವೀಕರಿಸತಕ್ಕದೆಂದಿದೆ. ಕಲಂ 52(4) ರನ್ವಯ ಇಂತಹ ಅಪರಾಧಗಳಿಗೆ ಶಿಕ್ಷೆಯನ್ನು ವಿಧಿಸಲು ಮೊದಲನೇ ದರ್ಜೆಯ ನ್ಯಾಯಿಕ ದಂಡಾಧಿಕಾರಿ ಅಥವಾ ಮಹಾನಗರದ ದಂಡಾಧಿಕಾರಿಯವರಿಗಿಂತ ಕೆಳ ನ್ಯಾಯಾಲಯಗಳಲ್ಲಿ ತೀರ್ಮಾನಿಸತಕ್ಕದ್ದಲ್ಲ ಎಂದಿದೆ.

ಕೆಲವು ವಕ್ಫ್ ಸಂಸ್ಥೆಗೆ ಸೇರಿದ ಆಸ್ತಿಯಲ್ಲಿ ಅನಧಿಕೃತ ಒತ್ತುವರಿದಾರರಿಗೆ ಕಟ್ಟಡ ನಿರ್ಮಾಣಕ್ಕೆ ಅವಕಾಶ ಕಲ್ಪಿಸಿರುವುದನ್ನು ಹಾಗೂ ವಕ್ಫ್ ಸಂಸ್ಥೆಯ ಅಥವಾ ವಕ್ಫ್ ಮಂಡಳಿಯ ಪೂರ್ವಾನುಮತಿ ಇಲ್ಲದೇ ಕಟ್ಟಡ ನಿರ್ಮಿಸುವ ಪರವಾನಗಿಗಳನ್ನು ನೀಡಿರುವುದು ಗಮನಿಸಲಾಗಿದೆ. ಇದರಿಂದಾಗಿ ವಕ್ಫ್ ಮಂಡಳಿಗೆ ತುಂಬಲಾರದ ನಷ್ಟ ಹಾಗೂ ಸುದೀರ್ಘ ವ್ಯಾಜ್ಯಗಳಿಗೆ ಅನುವು ಮಾಡಿದಂತಾಗಿರುತ್ತದೆ. ಗ್ರಾಮಾಂತರ ಪ್ರದೇಶಗಳಲ್ಲಿ ವಸತಿ ಸೌಲಭ್ಯದ ದೃಷ್ಟಿಯಲ್ಲಿ ಗ್ರಾಮ ಪಂಚಾಯತಿಗಳು ಬಡಾವಣೆಗಳಿಗೆ ಅನುಮತಿ ನೀಡುತ್ತಿದ್ದು, ಇಂತಹ ಬಡಾವಣೆಗಳಲ್ಲಿ ವಕ್ಫ್ ಆಸ್ತಿಗಳು ಬಂದಲ್ಲಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಹಾಗೂ ಸ್ಥಳೀಯ ವಕ್ಫ್ ಸಂಸ್ಥೆಯ ಪೂರ್ವಾನುಮತಿ ಲಿಖಿತವಾಗಿ ಪಡೆಯತಕ್ಕದೆಂದು ಸೂಚಿಸಿದೆ.

ಅನೇಕ ಗ್ರಾಮಾಭಿವೃದ್ಧಿ ಕಾರ್ಯಗಳಿಗೆ ವಕ್ಫ್ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲಾಗುತ್ತಿದ್ದು, ವಕ್ಫ್ ಕಾಯ್ದೆಯ ಕಲಂ 51ರ ಅನುಸಾರ The Places of Worship (Special Provisions) Act, 1991 (42 Of 1991) ರ ಪ್ರಾವುದಾನಗಳಿಗೆ ವ್ಯತಿರಿಕ್ತವಾಗದೇ ಇದ್ದಲ್ಲಿ ಮಾತ್ರ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಗೆ ಸಮಾಲೋಚಿಸದೇ ಭೂಸ್ವಾಧೀನಪಡಿಸುವುದು ಅನೂರ್ಜಿತವಾಗುವುದೆಂದಿದೆ. ಇಂತಹ ಸಂದರ್ಭದಲ್ಲಿ ಪರ್ಯಾಯ ಜಮೀನನ್ನು ನೀಡಲು, ಹಾಗೂ ಜಮೀನು ಲಭ್ಯವಿಲ್ಲದಿದ್ದಲ್ಲಿ ಮಾತ್ರ ಮಾರುಕಟ್ಟೆ ಬೆಲೆಯ ಅನುಸಾರ ಗರಿಷ್ಠ ನಷ್ಟ ಭರ್ತಿ (Solatium) ಯೊಂದಿಗೆ ಮಂಜೂರಾತಿ ನೀಡಬೇಕೆಂದಿದೆ. ಆದ್ದರಿಂದ ಎಲ್ಲಾ ಗ್ರಾಮ ಪಂಚಾಯತಿಗಳು ಈ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ವಕ್ಫ್ ಆಸ್ತಿಗಳಿಗೆ ಸಂಬಂಧಿಸಿದ ರಾಜ್ಯ ಪತ್ರದಲ್ಲಿ ಪ್ರಕಟಿಸಿದ ಅಧಿಸೂಚನೆಯ ಪ್ರತಿ ಹಾಗೂ ವಕ್ಫ್ ಮಂಡಳಿಯಲ್ಲಿ ನೋಂದಾಯಿಸಿರುವ ಪ್ರತಿಗಳನ್ನು ಎಲ್ಲಾ ಗ್ರಾಮ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳಿಗೆ ಸಲ್ಲಿಸಲು ಜಿಲ್ಲಾ ವಕ್ಫ್ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಇಂತಹ ದಾಖಲೆಗಳನ್ನು ಶಾಶ್ವತವಾಗಿ ಎಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯತಿಗಳ ಕಛೇರಿಗಳಲ್ಲಿ ನಿರ್ವಹಿಸಿ ಸೂಕ್ತ ಕ್ರಮಕೈಗೊಳ್ಳಲು ಸೂಚಿಸಿದೆ.

ಮೇಲಿನ ಸೂಚನೆಗಳನ್ನು ತಪ್ಪದೇ ಪಾಲಿಸತಕ್ಕದ್ದು, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮೇಲುಸ್ತುವಾರಿ ಮಾಡುವುದು ಹಾಗೂ ತಮ್ಮ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡುವುದು. ಇದರಲ್ಲಿ ಆಗುವ ಲೋಪದೋಷಕ್ಕೆ ಕಾರಣರಾದವರನ್ನು ಹೊಣೆಗಾರರನ್ನಾಗಿ ಪರಿಗಣಿಸಿ ಇಲಾಖಾ ವಿಚಾರಣೆಯ ನಂತರ ಕಟ್ಟುನಿಟ್ಟಿನ ಕ್ರಮಜರುಗಿಸಲು ಸೂಚಿಸಿದೆ.

**(ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್) ರವರಿಂದ ಅನುಮೋದಿತ)**

(ಎಂ.ಕೆ.ಕೆಂಪೇಗೌಡ)
ನಿರ್ದೇಶಕರು(ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:** ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಮುಂಬರುವ ಸಂಚಿಕೆಯಲ್ಲಿ ಪ್ರಕಟಿಸಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ 500 ಪ್ರತಿಗಳನ್ನು ಒದಗಿಸಲು ಕೋರಿದೆ.

**ಇವರಿಗೆ:**

1) ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3) ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4) ಸಂಪಾದಕರು, ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.
5) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6) ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾ.ಅ. ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
2) ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
3) ಪ್ರಧಾನ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4) ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
5) ಮುಖ್ಯ ಕಾರ್ಯನಿರ್ವಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಬೆಂಗಳೂರು.